[redacted]



# ಅಕ್ಷರದಾಸೋಹ ಯೋಜನೆ ವಿದ್ಯಾರ್ಥಿಗಳ ಹಾಜರಾತಿಗೆ ಪೂರಕ- ಗಿರೆಣ್ಣವರ



ಮೂಡಲಗಿ: ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹಾಗೂ ಹಾಜರಾತಿ ಹೆಚ್ಚಳಕ್ಕೆ ಸರಕಾರದ ಅಕ್ಷರದಾಸೋಹ ಯೋಜನೆ ತುಂಬಾ ಪರಿಣಾಮಕಾರಿಯಾಗಿದೆ ಎಂದು ಮುಖ್ಯ ಶಿಕ್ಷಕ ಎ.ವ್ಹಿ ಗಿರೆಣ್ಣವರ ಹೇಳಿದರು.

ಅವರು ಗುರುವಾರದಂದು ತಾಲೂಕಿನ ತುಕ್ಕಾನಟ್ಟಿ ಸರಕಾರಿ ಹಿರಿಯ ಮಾಧ್ಯಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಅಕ್ಷರದಾಸೋಹ ಯೋಜನೆಯಲ್ಲಿ ವಿಶೇಷ ಭೋಜನ ಏರ್ಪಡಿಸಿ ಮಾತನಾಡಿ, ವಿದ್ಯಾರ್ಥಿಗಳ ಹಸಿವಿನಿಂದ ಶಾಲಾ ದಾಖಲಾತಿ ಹಾಗೂ ಹಾಜರಾತಿ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರಕಾರಗಳು ಜಾರಿಗೆ ತಂದಿರುವ ಈ ಅಕ್ಷರದಾಸೋಹ ಯೋಜನೆ ದೇಶದಲ್ಲಿ ಎಷ್ಟೋ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ಆಸರೆಯಾಗಿದೆ. ಇದರ ಜೊತೆಗೆ ಪೌಷ್ಟಿಕಾಂಶದ ಹಾಲು, ರಾಗಿ , ಬಾಳೆ ಹಣ್ಣು ಹಾಗೂ ಮಾತ್ರೆಗಳನ್ನು ನೀಡುತ್ತಿರುವದರಿಂದ ವಿದ್ಯಾರ್ಥಿಗಳ ಹಸಿವಿನ ಸಮಸ್ಯೆ ನೀಗಿ ಕಲಿಕೆಗೆ ಅನುಕೂಲವಾಗಿದೆ. ಇದರಿಂದ ವಿದ್ಯಾರ್ಥಿಗಳಿಗೆ ಹಸಿವಿನ ಬಾಧೆ ಕಾಡುವದಿಲ್ಲ ಅದರಲ್ಲೂ ತುಕ್ಕಾನಟ್ಟಿ ಸರಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಉತ್ತರ ಕರ್ನಾಟಕ ಭಾಗದ ಎಲ್ಲ ತರಹದ ಆಹಾರವನ್ನು ನೀಡಲಾಗಿದೆ. ವಿದ್ಯಾರ್ಥಿಗಳು ಆರೋಗ್ಯದಿಂದ ಇದ್ದಾಗ ಮಾತ್ರ ಎಲ್ಲವೂ ಸಾದ್ಯ ಎಂದರು.

ಇವತ್ತಿನ ವಿಶೇಷ ಭೋಜನದಲ್ಲಿ ಸುಮಾರು 700 ವಿದ್ಯಾರ್ಥಿಗಳಿಗೆ ಕುರ್ಮಾ ಪುರಿ, ಬಟಾಟೆ ಬಾಜಿ, ಪುಳಿಯೊಗರೆ, ಸಾಂಬಾರ ನೀಡಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕರಾದ ಕುಸುಮಾ ಚಿಗರಿ, ವಿಮಲಾಕ್ಷಿ ತೋರಗಲ್, ಪುಷ್ಪಾ ಭರಮದೆ, ಶಂಕರ ಲಮಾಣಿ, ಬಸವರಾಜ ನಾಯಕ, ಪ್ರಿಯಾಂಕಾ ಡಿ.ಕೆ. ಸೋಮಶೇಖರ ವಾಯ್.ಆರ್., ಸುಜಾತಾ ಕೋಳಿ, ರೂಪಾ ಹೂಲಿಕಟ್ಟಿ, ಮಹಾದೇವ ಗೋಮಾಡಿ, ಲಕ್ಷ್ಮೀ ಹೆಬ್ಬಾಳ ಉಪಸ್ಥಿತರಿದ್ದರು.

# ಹಿಂಗಾಣಿ ಹಾಗೂ ದೇವಣಗಾಂವ ಚೆಕ್‌ಪೋಸ್ಟ್‌ಗಳಿಗೆ ಡಿಸಿ ಭೇಟಿ



ವಿಜಯಪುರ, ಮಾ.-: ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಗುರುವಾರದಂದು ಇಂಡಿ ತಾಲೂಕಿನ ಅಗರಖೇಡ ಹತ್ತಿರದ ಚಿಕ್ಕಮಣೂರು ಕ್ರಾಸ್ ಹಾಗೂ ಹಿಂಗಾಣಿ ಬಳಿ ನಿರ್ಮಿಸಲಾಗಿರುವ ಚೆಕ್ ಪೋಸ್ಟ್ ಮತ್ತು ಇಂಡಿ ಪಟ್ಟಣದಲ್ಲಿ ಸ್ಥಾಪಿಸಿರುವ ಭದ್ರತಾ ಕೊಠಡಿಗೆ ಭೇಟಿ ನೀಡಿ ಕಾರ್ಯ ವೈಖರಿಯನ್ನು ಪರಿಶೀಲಿಸಿದರು.

ಈ ವೇಳೆ ಭದ್ರತಾ ಕೊಠಡಿಯಲ್ಲಿ ಇರಿಸಲಾಗಿರುವ ಇವಿ ಎಂ ಭದ್ರತೆಯನ್ನು ಕೂಲಂಕುಸವಾಗಿ ಪರಿಶೀಲಿಸಿದರು. ಚೆಕ್‌ಪೋಸ್ಟಳಲ್ಲಿನ ಅಧಿಕಾರಿ ಮತ್ತು ಸಿಬ್ಬಂದಿಯ ಹಾಜರಾತಿ, ಶಾಮಿಯಾನ, ಕುಡಿಯುವ ನೀರು ಸೇರಿದಂತೆ ಚೆಕ್ ಪೋಸ್ಟ್ ಗಳ ವ್ಯವಸ್ಥೆಯ ಬಗ್ಗೆ ಮಾಹಿತಿ ಪಡೆದರು. ಚೆಕ್‌ಪೋಸ್ಟಳು ಸರಿಯಾಗಿ ಕಾರ್ಯ ನಿರ್ವಹಿಸಬೇಕು. ಚೆಕ್‌ಪೋಸ್ಟಳಿಗೆ ನಿಯೋಜನೆಗೊಂಡ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಸರಿಯಾದ ಸಮಯಕ್ಕೆ ಪಾಳಿ ಅನುಸಾರ ಹಾಜರಾಗಿ ಕಾರ್ಯ ನಿರ್ವಹಿಸಬೇಕು. ಪ್ರತಿಯೊಂದು ವಾಹನವನ್ನು ತಪಾಸಣೆಗೆ ಒಳಪಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸ್ಥಳದಲ್ಲಿದ್ದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ್ ಸೋನಾವಣೆ, ಇಂಡಿ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ತಹಶೀಲ್ದಾರ ಮಂಜುಳಾ ನಾಯಕ ಸೇರಿದಂತೆ ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿ ಇದ್ದರು.

ದೇವಣಗಾಂವ ಬಳಿ ನಿರ್ಮಿಸಲಾಗಿರುವ ಅಂತರ ಜಿಲ್ಲಾ ಚೆಕ್ ಪೋಸ್ಟ್ ಗೆ ಡಿಸಿ ಹಾಗೂ ಎಸ್ಪಿ ಗುರುವಾರ ಭೇಟಿ ನೀಡಿದರು. ಈ ವೇಳೆ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ್ ಸೋನಾವಣೆ, ಅನುಮಾನಾಸ್ಪದ ವಾಹನಗಳು ಅಥವಾ, ವ್ಯಕ್ತಿ ಕಂಡು ಬಂದರೇ ಕೂಲಂಕುಶವಾಗಿ ಪರಿಶೀಲನೆ ನಡೆಸಬೇಕು. ಅಕ್ರಮವಾಗಿ ಹಣ ಹಾಗೂ ಮದ್ಯ ಸಾಗಾಟ ಮಾಡುತ್ತಿರುವುದು ಕಂಡು ಬಂದಲ್ಲಿ, ತಕ್ಷಣವೇ ಕಾರ್ಯಪ್ರವೃತ್ತರಾಗಿ, ಮೇಲಾಧಿಕಾರಿಗಳ ಗಮನಕ್ಕೆ ತರಬೇಕು ಎಂದು ತಿಳಿಸಿದರು.

# ಅರಿತು ನಡೆದರೆ ಒತ್ತಡವಿಲ್ಲ; ಶ್ರೀ ರಾಜಶೇಖರ ಪಾಟೀಲ



ಕೊಪ್ಪಳ ಡಿ.-ಅರಿತು ನಡೆದರೆ ಒತ್ತಡಗಳಿಲ್ಲ, ಮನಸ್ಸು ಸಶಕ್ತವಾಗಿದ್ದಲ್ಲಿ ಬದುಕು ಒತ್ತಡದಿಂದ ದೂರವಿರುತ್ತದೆ ಎಂದು ಭಾಗ್ಯನಗರದ ಸರಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಶ್ರೀ ರಾಜಶೇಖರ ಪಾಟೀಲರವರು ನುಡಿದರು. ಅವರು ನಗರದ ಶ್ರೀ ಗವಿಸಿದ್ಧೇಶ್ವರ ಮಹಾವಿದ್ಯಾಲಯದಲ್ಲಿ ನಡೆದ 2018ರ

ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ 'ಸಶಕ್ತ ಮನ - ಸಂತೃಪ್ತ ಜೀವನ' ಎಂಬ ಧ್ಯೇಯದಡಿಯಲ್ಲಿ 'ನಮ್ಮ ನಡೆ ಒತ್ತಡ ರಹಿತ ಬದುಕಿನ ಕಡೆ' ಎಂಬ ಶಿರ್ಷಿಕೆಯಡಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಮನಸ್ಸನ್ನು ಗಟ್ಟಿಯಾಗಿ, ಸಶಕ್ತವಾಗಿ ಮಾಡಿಕೊಂಡಾಗ ಎಂತಹ ಸಮಸ್ಯೆಗಳು ಬಂದರೂ ಎದುರಿಸುವ ಸಾಮರ್ಥ್ಯ ಬರುತ್ತದೆ.

ಬಾಲಕರಿಂದ ಹಿಡಿದು ಮುದುಕರವರೆಗೂ ಅನೇಕ ಒತ್ತಡಗಳಿರುತ್ತವೆ. ಅವುಗಳನ್ನು ಸಮರ್ಥವಾಗಿ ನಿಭಾಯಿಸುವ ಶಕ್ತಿಯು ಅವರಲ್ಲಿರುತ್ತದೆ. ಅದನ್ನು ಸದೃಢವಾಗಿ ಬಳಸಿಕೊಳ್ಳಬೇಕಿದೆ. ಗುರಿ ಮತ್ತು ಪ್ರಯತ್ನಗಳೆರಡೂ ಸಮನಾಗಿದ್ದಾಗ ಯಾವುದೇ ಒತ್ತಡಗಳು ಎದುರಾಗುವುದಿಲ್ಲ. ಗುರಿ ಮತ್ತು ಪ್ರಯತ್ನಗಳಲ್ಲಿ ವ್ಯತ್ಯಾಸಗಳಿದ್ದಾಗ ಮನುಷ್ಯನ ಬದುಕಿನಲ್ಲಿ ಒತ್ತಡಗಳು ಹೆಚ್ಚಾಗಿ ಬದುಕು ದುರಂತದ ಕಡೆಗೆ ಸಾಗುತ್ತದೆ ಎಂದರು. ಈ ಕಾರ್ಯಕ್ರಮದಲ್ಲಿ ಶ್ರೀ ಗವಿಸಿದ್ಧೇಶ್ವರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಪ್ರೊ. ಎಂ.ಎಸ್.ದಾದ್ಮಿ, ಪದವಿ ಪೂರ್ವ ಪ್ರಾಚಾರ್ಯರಾದ ಡಾ. ಸಿದ್ದಲಿಂಗಪ್ಪ ಕೊಟ್ನೆಕಲ್ ಉಪಸ್ಥಿತರಿದ್ದರು.

ಈ ಕಾರ್ಯಕ್ರಮದ ನಿರೂಪಣೆಯನ್ನು ಉಪನ್ಯಾಸಕರಾದ ಶ್ರೀ ಅಶೋಕ ಓಜಿನಹಳ್ಳಿ ನೆರವೇರಿಸಿದರೆ, ಶ್ರೀ ಶಿವನಗೌಡ ಪೋಲಿಸ ಪಾಟೀಲ ಅತಿಥಿಗಳನ್ನು ಪರಿಚಯಿಸಿದರು. ಕುಮಾರಿ. ಮೇಘನಾ ಕುಲಕರ್ಣಿ ಪ್ರಾರ್ಥನೆಗೈದರು. ಈ ಕಾರ್ಯಕ್ರಮದಲ್ಲಿ ಸುಮಾರು 2000ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# "ಎವಾಪರೇಟರ ಹಾಗೂ ಜ್ಯೂಸ್ ಹಿಟರ್" ಮೂಲ ತತ್ವಗಳು, ಕೈಗಾರಿಕೆಗಳಲ್ಲಿ ಅಳವಡಿಕೆ ಮತ್ತು ಹೊಸ ತಾಂತ್ರಿಕತೆಗಳ" ಕುರಿತು ವಿಚಾರ ಸಂಕಿರಣ



ಬೆಳಗಾವಿ-:ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿಯು ದಿನಾಂಕ. 31.05.2016 ಹಾಗೂ 01.06.2016 ರಂದು "ಎವಾಪರೇಟರ ಹಾಗೂ ಜ್ಯೂಸ್ ಹಿಟರ್" ಮೂಲ ತತ್ವಗಳು, ಕೈಗಾರಿಕೆಗಳಲ್ಲಿ ಅಳವಡಿಕೆ ಮತ್ತು ಹೊಸ ತಾಂತ್ರಿಕತೆಗಳ ವಿಚಾರ ಸಂಕಿರಣವನ್ನು ಕರ್ನಾಟಕದ ಎಲ್ಲ ಸಕ್ಕರೆ ಕಾರ್ಖಾನೆಗಳ ತಾಂತ್ರಿಕ ಸಿಬ್ಬಂದಿಗಳಿಗೆ ಸಂಸ್ಥೆಯ ಸಭಾಂಗಣದಲ್ಲಿ ಏರ್ಪಡಿಸಲಾಗಿತ್ತು.

ವಿಚಾರ ಸಂಕಿರಣದ ಮುಖ್ಯ ಅತಿಥಿ ಹಾಗೂ ಉಪನ್ಯಾಸಕರಾಗಿ ಡಾ॥ ಎಂ. ಬಿ. ಲೊಂಡೆ, ಸಕ್ಕರೆ ಉದ್ದಿಮೆ ಸಲಹಗಾರರು ಇವರು ಆಗಮಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಮದ್ಯಸಾರ ಘಟಕದ ಮುಖ್ಯಸ್ಥರಾದ ಶ್ರೀ. ಜೆ. ಬಿ. ಸುತಾರ ಅವರು ವಹಿಸಿಕೊಂಡಿದ್ದರು. ಶ್ರೀ. ಜೆ. ಬಿ. ಸುತಾರ ರವರು ಕಾರ್ಯಕ್ರಮದ ಅಧ್ಯಕ್ಷೀಯ ಭಾಷಣದಲ್ಲಿ ಪ್ರಸ್ತಾವಿಕವಾಗಿ ಸಂಸ್ಥೆಯಿಂದ ಸಕ್ಕರೆ ಕಾರ್ಖಾನೆಗಳ ತಾಂತ್ರಿಕ ಸಿಬ್ಬಂದಿಗಳಿಗೆ ಸಂಸ್ಥೆಯ ವತಿಯಿಂದ ವಿವಿಧ ತಾಂತ್ರಿಕ ಚಟುವಟಿಕೆಗಳ ಹಾಗೂ ಇನ್ನಿತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಮಾತನಾಡಿದರು. ಉಪನ್ಯಾಸಕರಾಗಿ ಆಗಮನಸಿದ ಡಾ॥ ಎಂ. ಬಿ. ಲೊಂಡೆ ಅವರು ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿದರು ಮತ್ತು ಎರಡು ದಿನ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಕ್ಕರೆ ಕಾರ್ಖಾನೆಗಳಲ್ಲಿ ಹೊಸದಾಗೆ ತಾಂತ್ರಿಕತೆಯನ್ನು ಜ್ಯೂಸ್ ಹಿಟರನಲ್ಲಿ ಮೂಲ ಪ್ರಕಾರಗಳ ಅಳವಡಿಸುವ ಬಗ್ಗೆ ಹಾಗೂ ವಿಧಾನವನ್ನು ನಡೆಸುವ ಪದ್ಧತಿಯನ್ನು ಮತ್ತು ಏವಾಪರೇಟರನಲ್ಲಿ ಉತ್ಪಾದನೆಯಾಗುವ ಫ್ಲಾಶ ಹಿಟ್ ರಿಕವ್ವರಿ ಅಳವಡಿಸುವ ಪದ್ಧತಿಯನ್ನು ಉಪಯೋಗಿಸುವರಿಂದ ಕಡಿಮೆ ಸ್ಟೀಮ್‌ನಲ್ಲಿ ಹೆಚ್ಚಿನ ಗುಣಮಟ್ಟದ ಸಕ್ಕರೆ ಉತ್ಪಾದನೆ ಮಾಡುವದರಿಂದ ಕಾರ್ಖಾನೆಗೆ ಸಕ್ಕರೆ ಉತ್ಪಾದನೆಯಲ್ಲಿ ಕಡಿಮೆ ವೆಚ್ಚ ಬರುತ್ತದೆ. ಈ ಪದ್ಧತಿಯನ್ನು ಹೊಸದಾಗಿ ತಾಂತ್ರಿಕತೆಯನ್ನು ನಕ್ಷೆಯ ಮೂಲಕ ತಿಳಿಸಿ ಕೊಟ್ಟರು.

ದಿನಾಂಕ 01.06.2016 ರಂದು ಸಂಜೆ 04.00 ಘಂಟೆಗೆ ಕಾರ್ಯಕ್ರಮದ ಸಮಾರೋಪ ಸಮಾರಂಭ ಹಮ್ಮಿಕೊಳ್ಳಲಾಯಿತು.

ಈ ವಿಚಾರ ಸಂಕಿರಣದಲ್ಲಿ ಎಲ್ಲ ಸಕ್ಕರೆ ಕಾರ್ಖಾನೆಗಳಿಂದ ಸುಮಾರು 100 ಜನ ತಾಂತ್ರಿಕ ಸಿಬ್ಬಂದಿಯವರು ಪಾಲ್ಗೊಂಡು ಎರಡು ದಿನದ ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡರು. ಶ್ರೀ. ರಮೇಶ ಹನಸಿ, ವ್ಯವಸ್ಥಾಪಕರು, ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು. ಶ್ರೀ. ಜೆ. ಬಿ. ಸುತಾರ ಅತಿಥಿಗಳನ್ನು ಸ್ವಾಗತಿಸಿದರು.

# ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಮೃಣಾಲ್ ಹೆಬ್ಬಾಳಕರ್ ಮತಯಾಚನೆ



ಮೂಡಲಗಿ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಬೆಳಗಾವಿ ಲೋಕಸಭಾ ಕಾಂಗ್ರೇಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಅವರು ಗುರುವಾರದಂದು ಮೂಡಲಗಿ ತಾಲೂಕಿನ ಕಲ್ಲೋಳಿ ಪಟ್ಟಣದ ಹನುಮಾನ ಹಾಗೂ ಮಹಾಲಕ್ಷ್ಮೀ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದುಕೊಂಡರು.

ನಂತರ ಕಲ್ಲೋಳಿ ಪಟ್ಟಣದ ಮುಖಂಡರಾದ ಬಸನಗೌಡ ಪಾಟೀಲ, ರಾವಸಾಬ್ ಬೆಳಕೂಡ, ನಾಗನೂರ ಪಟ್ಟಣದ ಬಸಗೌಡ ಆರ್ ಪಾಟೀಲ್, ತುಕ್ಕಾನಟ್ಟಿಯ ಶಿವಪ್ಪ ಮರ್ದಿ, ಪರುಶುರಾಮ ಗದಾಡಿ ಅವರ ಮನೆಗೆ ಭೇಟಿ ನೀಡಿ ಮೇ.7ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಮೃಣಾಲ್ ಹೆಬ್ಬಾಳಕರ್ ಅವರಿಗೆ ಆರ್ಶಿವಾದ ಮಾಡಬೇಕೆಂದು ಮತಯಾಚಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೇಸ್ ಮುಖಂಡರಾದ ಬಿ.ಬಿ.ಬೆಳಕೂಡ, ಡಾ.ಮಹಾಂತೇಶ ಕಡಾಡಿ, ರಾವಸಾಬ್ ಬೆಳಕೂಡ, ಲಖನ್ ಸವಸುದ್ದಿ, ಭರಮಣ್ಣ ಉಪ್ಪಾರ, ಮಲ್ಲಪ್ಪ ಖಾನಾಪೂರ, ಶೀತಲ್ ಅಥಣಿ, ಪರಪ್ಪ ಕಡಾಡಿ, ಶಂಕರ ಬೆಳಕೂಡ, ಉಮೇಶ ಪಾಟೀಲ, ಸಿದ್ದಣ್ಣ ಮುಗಳಿ, ಸಿದ್ದಪ್ಪ ಮಾಯನ್ನವರ, ಶಿವಾನಂದ ಹೆಬ್ಬಾಳ, ಅಜೀತ ಚಿಕ್ಕೋಡಿ, ಅಜೀತ ಬೆಳಕೂಡ ಹಾಗೂ ಅನೇಕ ಕಾಂಗ್ರೇಸ್ ಕಾರ್ಯಕರ್ತರು ಇದ್ದರು.

# ಉಡಾಳ ಚಿತ್ರದ ಮೊದಲ ಹಂತದ ಚಿತ್ರೀಕರಣ ವಿಜಯಪುರದಲ್ಲಿ ಪೂರ್ಣ



ವಿಜಯಪುರ.ಮಾ,- ಯೋಗರಾಜ್ ಸಿನಿಮಾಸ್ ಹಾಗೂ ರವಿ ಶಾಮನೂರು ಫಿಲಂಸ್ ಲಾಂಛನದಲ್ಲಿ ದಾವಣಗೆರೆಯ ರವಿ ಶಾಮನೂರು ಹಾಗೂ ಯೋಗರಾಜ್ ಭಟ್ ಅವರು ನಿರ್ಮಿಸುತ್ತಿರುವ, ಅಮೋಲ್ ಪಾಟೀಲ್ ನಿರ್ದೇಶನದಲ್ಲಿ ಪೃಥ್ವಿ ಶಾಮನೂರು ನಾಯಕನಾಗಿ ನಟಿಸುತ್ತಿರುವ "ಉಡಾಳ" ಚಿತ್ರಕ್ಕೆ ಬಿಜಾಪುರದಲ್ಲಿ ಮೊದಲ ಹಂತದ ಚಿತ್ರೀಕರಣ ನಡೆದಿದೆ. ಚಿತ್ರದ ನಾಯಕ ಪೃಥ್ವಿ ಈ ಚಿತ್ರದಲ್ಲಿ ಗೈಡ್ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. 25 ದಿನಗಳ ಮೊದಲ ಹಂತದ ಚಿತ್ರೀಕರಣದಲ್ಲಿ ಹಾಡು, ನೃತ್ಯ ಹಾಗೂ ಮಾತಿನ ಭಾಗದ ಸನ್ನಿವೇಶಗಳನ್ನು ಚಿತ್ರಿಸಿಕೊಳ್ಳಲಾಗಿದೆ. ಈ ಭಾಗದ ಚಿತ್ರೀಕರಣ ಸಂಪೂರ್ಣ ಬಿಜಾಪುರದಲ್ಲೇ ನಡೆದಿದೆ. ಈಗಾಗಲೇ ಚಿತ್ರದ ಮುಕ್ಕಾಲು ಭಾಗದ ಚಿತ್ರೀಕರಣ ಮುಕ್ತಾಯವಾಗಿದೆ.ಸದ್ಯದಲ್ಲೇ ದ್ವಿತೀಯ ಹಂತದ ಚಿತ್ರೀಕರಣ ಆರಂಭವಾಗಲಿದೆ ಎಂದು ನಿರ್ದೇಶಕ ಅಮೋಲ್ ಪಾಟೀಲ್ ತಿಳಿಸಿದ್ದಾರೆ."ಉಡಾಳ" ಪಕ್ಕಾ ಕಮರ್ಷಿಯಲ್ ಜಾನರ್ ಚಿತ್ರವಾಗಿದೆ. ಲವ್, ಕಾಮಿಡಿ ಸೇರಿದಂತೆ ಎಲ್ಲಾ ಅಂಶಗಳು ಈ ಚಿತ್ರದಲ್ಲಿದೆ. ಬಿಜಾಪುರ ಹಾಗು ಉತ್ತರ ಕರ್ನಾಟಕದಲ್ಲಿ ನಡೆಯುವಂತಹ ಅಪ್ಪಟ ಜವಾರಿ ಕಥೆಯಾಗಿದೆ.ಯೋಗರಾಜ್ ಭಟ್ ಅವರ ಜೊತೆಗೆ ಸಹ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಅಮೋಲ್ ಪಾಟೀಲ್ ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿ ಚಿತ್ರರಂಗ ಪ್ರವೇಶಿಸಿದ್ದಾರೆ, ಅಮೋಲ್ ಪಾಟೀಲ್ ಬಿಜಾಪುರ ಮೂಲದವರು ಎನ್ನುವುದು ಮತ್ತೊಂದು ವಿಶೇಷ.ತಮ್ಮ ಮೊದಲ ಚಿತ್ರ "ಪದವಿಪೂರ್ವ" ದಲ್ಲೇ ಬಯಲು ಸೀಮೆ ದಾವಣಗೆರೆಯ ಪೃಥ್ವಿ ಶಾಮನೂರು ಪ್ರೇಕ್ಷಕರ ಮನ ಗೆದ್ದಿದ್ದರು. ಪ್ರಸ್ತುತ ಅವರು ನಾಯಕರಾಗಿ ನಟಿಸುತ್ತಿರುವ "ಉಡಾಳ" ಚಿತ್ರದ ಕುರಿತು ಸಾಕಷ್ಟು ನಿರೀಕ್ಷೆಯಿದೆ. ಪೃಥ್ವಿ ಶಾಮನೂರು ಅವರಿಗೆ ನಾಯಕಿಯಾಗಿ ಹೃತಿಕ ಶ್ರೀನಿವಾಸ್ ನಟಿಸುತ್ತಿದ್ದಾರೆ. ಬಲ ರಾಜವಾಡಿ, ಸುಮಿತ್, ಹರೀಶ್ ಹಿರಿಯೂರು, ಮಾಳು ನಿಪ್ನಾಳ್, ಪ್ರವೀಣ್ ಗೋಕಾಕ್, ವಾದಿರಾಜ್, ದಯಾನಂದ್ ಮುಂತಾದವರು ತಾರಾಬಳಗದಲ್ಲಿದ್ದಾರೆ.ಯೋಗರಾಜ್ ಭಟ್ ಅವರು ಚಿತ್ರದ ಹಾಡುಗಳನ್ನು ರಚಿಸಿದ್ದು,ಚೇತನ್ ಡ್ಯಾವಿ ಸಂಗೀತ ನೀಡಿದ್ದಾರೆ. ಶಿವಶಂಕರ್ ನೂರಂಬಡ ಛಾಯಾಗ್ರಹಣ,ಅರ್ಜುನ್ ರಾಜ್ ಸಾಹಸ ನಿರ್ದೇಶನ ಹಾಗೂ ಮೋಹನ್, ರಘು ಅವರ ನೃತ್ಯ ನಿರ್ದೇಶನ "ಉಡಾಳ" ಚಿತ್ರಕ್ಕಿದೆ.ಈ ಹಿಂದೆ ಪದವಿ ಪೂರ್ವ ಸಿನಿಮ ನಿರ್ಮಾಣ ಮಾಡಿದ್ದ ದಾವಣಗೆರೆಯ ರವಿ ಶಾಮನೂರು ಹಾಗೂ ಯೋಗರಾಜ್ ಭಟ್ ಮತ್ತೆ ಈ ಚಿತ್ರಕ್ಕಾಗಿ ಒಂದಾಗಿದ್ದಾರೆ. ಇದೆ ವರ್ಷದ ಕೊನೆಯಲ್ಲಿ ಸಿನಿಮ ರಿಲಿಜ್ ಮಾಡುವಸಾಧ್ಯತೆ ಇದೆ.ಬಿಜಾಪುರದ ಜನತೆಗೆ, ಪೊಲೀಸ್ ಇಲಾಖೆಗೆ,ವಿದ್ಯಾರ್ಥಿಗಳಿಗೆ, ಎಸ್ ಎಸ್ ಕಾಲೇಜಿನ ಸಂಸ್ಥೆಗೆ, ಪುರಾತತ್ವ ಇಲಾಖೆಗೆ,ಜೆ ಸ್ ಸ್ ಸಂಸ್ಥೆಗೆ,ಟಂಟಂ ಚಾಲಕರಿಗೆ ಮಾಧ್ಯಮ ಮಿತ್ರರಿಗೆ ಹಾಗು ಚಿತ್ರೀಕರಣಕ್ಕೆ ಸಹಕರಿಸಿದ ಎಲ್ಲರಿಗೂ ಇಡೀ ಉಡಾಳ ತಂಡ ಧನ್ಯವಾದ ಸಲ್ಲಿಸಿದೆ.

# ಭೀಮಾ ನದಿ ತೀರದ ಹಿಂಗಾಣಿ ಬ್ಯಾರೇಜ್ ಗೆಜಿಲ್ಲಾಧಿಕಾರಿ ಟಿ. ಭೂಬಾಲನ್ ಭೇಟಿ



ವಿಜಯಪುರ, ಮಾ.- : ನಾರಾಯಣಪೂರಜಲಾಶಯದಿಂದ ಭೀಮಾ ನದಿಗೆ ಜನ ಜಾನುವಾ ರಗಳಿಗೆ ಕುಡಿಯುವ ಉದ್ದೇಶಕ್ಕಾಗಿ 1 ಟಿಎಂಸಿ ನೀರು ಬಿಡುಗಡೆಮಾಡಲಾಗುತ್ತಿರುವುದರಿಂದ ಮುನ್ನೆಚ್ಚರಿಕೆ ಕ್ರಮವಾ ಗಿಜಿಲ್ಲಾಧಿಕಾರಿ ಟಿ.ಭೂಬಾಲನ್ ಇಂಡಿ ತಾಲೂಕಿನ ಹಿಂಗಾಣಿ ಬ್ಯಾರೆಜ್ ಗೆಗುರುವಾರ ಭೇಟಿ ನೀಡಿ ಪರಿಶೀಲಿಸಿದರುಕುಡಿಯುವ ಉದ್ದೇಶಕ್ಕಾಗಿ ನೀರನ್ನು ಹರಿಸಲಾಗುತ್ತಿರುವುದರಿಂದ ಭೀಮಾನದಿ ನದಿ ನೀರನ್ನು ಅವಲಂಬಿಸಿದಬಹುಹಳ್ಳಿ ಕುಡಿಯುವ ನೀರಿನ ಯೋಜನೆಯ ಸಮರ್ಪಕ ಸಾಕಾರಕ್ಕೆಅಧಿಕಾರಿಗಳು ತಕ್ಷಣದಿಂದಲೇ ಜಾಗೃತೆ ವಹಿಸಿಕೊಂಡು,ಕಡ್ಡಾಯವಾಗಿ ಯಾವುದೇ ಕಾರಣಕ್ಕೂ ನೀರು ಪೋಲಾಗದಂತೆಹಾಗೂ ಅಂತಿಮ ಸೂಚಿತ ಪ್ರದೇಶಗಳಿಗೆ ಕುಡಿಯುವ ನೀರುತಲುಪುವಂತೆ ಆದ್ಯತೆ ನೀಡಿ ಕಾರ್ಯನ್ಮೋಮುಖರಾಗಬೇಕುಎಂದು ಸೂಚಿಸಿದರು.

ಅನ್ಯ ಚಟುವಟಿಕೆಗಳಿಗೆ ನೀರನ್ನು ಬಳಸುವುದನ್ನು ಅಧಿಕಾರಿಗಳು ಕಟ್ಟುನಿಟ್ಟಾಗಿ ತಪ್ಪಿಸಬೇಕು. ಡಿಸೇಲ್, ಮೋಟಾರುಯಂತ್ರಗಳ ಮೂಲಕ ನೀರನ್ನು ಎತ್ತುವುದನ್ನುತಡೆಯಬೇಕು. ಹಗಲುರಾತ್ರಿ ಪಾಳಿಯಲ್ಲಿ ವಾಚ್-ವಾರ್ಡಮಾಡಬೇಕು. ನದಿ ಪಾತ್ರಗಳಲ್ಲಿ ಬರುವ ಬ್ಯಾರೇಜ್‌ಗಳುತುಂಬಿಸುವಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಈ ವೇಳೆ ಇಂಡಿ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ, ತಹಶೀಲ್ದಾರಮಂಜುಳಾ ನಾಯಕ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳುಉಪಸ್ಥಿತರಿದ್ದರು.

# ಜಿಲ್ಲಾಡಳಿತದಿಂದ ಶ್ರೀ ಅಗ್ನಿಬನ್ನಿರಾಯ ಜಯಂತಿ ಆಚರಣೆ

ವಿಜಯಪುರ, ಮಾ.-: ಜಿಲ್ಲಾಡಳಿತ ವತಿಯಿಂದ ಗುರುವಾರ ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಶ್ರೀ ಅಗ್ನಿಬನ್ನಿರಾಯ ಜಯಂತಿಯನ್ನು ಚುನಾವಣಾ ನೀತಿ ಸಂಹಿತೆ ಜಾರಿಯಾಗಿರುವುದರಿಂದ ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಯಿತು.ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಶ್ರೀ ಅಗ್ನಿಬನ್ನಿರಾಯ ರವರ ಭಾವಚಿತ್ರಕ್ಕೆ ಪೂಜೆ ಹಾಗೂ ಪುಷ್ಪಾರ್ಚನೆ ಮಾಡಿದರು. ಈ ವೇಳೆ ತಹಶೀಲ್ದಾರ ಕವಿತಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಬ್ಯುಬ್ ದ್ರಾಕ್ಷಿ ಸೇರಿದಂತೆ ಜಿಲ್ಲಾಧಿಕಾರಿ ಕಚೇರಿ ಸಿಬ್ಬಂದಿಗಳು ಪಸ್ಥಿತರಿದ್ದರು.